**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 83/2019**

**ಚಾ.ಸಾ–2**

**ಫ್ರಾ.ಸಾ–2**

**ಸಾಕ್ಷಿಗೆ ದಿನಾಂಕ 03–04–2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಕಾಶಿನಾಥ ಹಂಗರಗಿ |
| ತಂದೆಯ ಹೆಸರು | ಃ | ಭೀಮಾಶಂಕರ |
| ವಯಸ್ಸು | ಃ | 35 ವರ್ಷ |
| ಉದ್ಯೋಗ | ಃ | ಚಾಲಕ |
| ವಾಸಸ್ಥಳ | ಃ | ಸರಡಗಿ |

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ಆರೋಪಿತರು ಗೊತ್ತು. ಚಾಸಾ–3 ಗೊತ್ತು. ಚಾಸಾ–1 ಗೊತ್ತಿಲ್ಲ. ಪ್ರಕರಣದ ವಿಚಾರಗಳು ಗೊತ್ತಿಲ್ಲ.

ಸಾಕ್ಷಿಗೆ ನಿಪಿ–2 ರ ತೋರಿಸಲಾಗಿ ಅದು ಜಪ್ತಿ ಪಂಚನಾಮೆಯಾಗಿದ್ದು ಅದರ ಮೇಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು ಸಾಕ್ಷಿ ಹೆಬ್ಬೆಟ್ಟಿನ ಗುರುತನ್ನು ನಿಪಿ–2(ಬಿ) ಎಂದು ಗುರುತಿಸಲಾಯಿತು. ನಿಪಿ–2 ರ ದಾಖಲೆಗೆ ಸುಮಾರು ವರ್ಷಗಳ ಹಿಂದೆ ಸರಡಗಿ ಗ್ರಾಮದಲ್ಲಿ ಪೋಲೀಸರು ಬೀಟ್ ವಿಚಾರವಾಗಿ ಬಂದಿದ್ದು ಆಗ ಸಹಿ ಮಾಡಿರುತ್ತೇನೆ. ಚಾಸಾ–1 ರವರ ನಿಪಿ–2 ಸಹಿ ಮಾಡು ಅಂತಾ ಹೇಳಿದ ಕಾರಣ ಸಹಿ ಮಾಡಿರುತ್ತೇನೆ. ನಿಪಿ–2 ರಲ್ಲಿ ಬರೆದಂತಹ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಪಂಚನಾಮೆ ಮಾಡಿಲ್ಲ. ನನ್ನ ಸಮಕ್ಷಮ ಮರಳನ್ನು ಹಾಗೂ ಯಾವುದೇ ವಾಹನವನ್ನು ವಶಪಡಿಸಿಕೊಂಡಿಲ್ಲ. ಪೋಲಿಸರು ನಿಪಿ–2 ದಾಖಲೆಯಲ್ಲಿ ಬರೆದಂತಹ ವಿಚಾರಗಳನ್ನು ನನಗೆ ಓದಿ ಹೇಳಿಲ್ಲ. ಸಾಕ್ಷಿಗೆ 16 ಛಾಯಾಚಿತ್ರ ಗಳನ್ನು ತೋರಿಸಲಾಗಿ ಅದರಲ್ಲಿರುವ ಟಿಪ್ಪರ್ ವಾಹನವನ್ನು ನೋಡಿ ಗುರುತಿಸಿಲ್ಲ

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ**

ದಿನಾಂಕ 03-07-2015 ರಂದು ಕೋನಾ ಹಿಪ್ಪರಗಿ ಗ್ರಾಮದ ಭೀಮಾ ನದಿ ತೀರದಲ್ಲಿ ಬೆಳಿಗ್ಗೆ 08-00 ರಿಂದ 09-30 ಗಂಟೆವರೆಗೆ ಪೋಲಿಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-2 ರಂತೆ ಗುನ್ನಾ ಜಾಗೆ ಪಂಚನಾಮೆ ಜರುಗಿಸಿರುತ್ತಾರೆಂದರೆ ಸರಿಯಲ್ಲ. ಗುನ್ನಾ ಜಾಗವನ್ನು ಚಾಸಾ 1 ರವರು ನನಗೆ ಮತ್ತು ಚಾಸಾ-3 ರವರಿಗೆ ತೋರಿಸಿರುತ್ತಾರೆಂದರೆ ಸರಿಯಲ್ಲ. ಪೋಲಿಸರು 3 ಬ್ರಾಸ್ ಮರಳು ಹಾಗೂ 4 ಟಿಪ್ಪರ್ ವಾಹನಗಳನ್ನು ಆರೋಪಿತರು ಅಕ್ರಮವಾಗಿ ಮರಳನ್ನು ಸಾಗಾಟ ಮಾಡುತ್ತಿದ್ದ ವಿಚಾರವಾಗಿ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ ಇಲ್ಲ**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ

ಪ್ರ.ದ.ನ್ಯಾದಂಡಾಧಿಕಾರಿಗಳು, ಜೇವರಗಿ

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 83/2019**

**ಚಾ.ಸಾ–3**

**ಫ್ರಾ.ಸಾ–3**

**ಸಾಕ್ಷಿಗೆ ದಿನಾಂಕ 03–04–2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಬಸವರಾಜ ಕಿರಣಗಿ |
| ತಂದೆಯ ಹೆಸರು | ಃ | ಶಿವರಾಯ |
| ವಯಸ್ಸು | ಃ | 31 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಸರಡಗಿ ಬಿ |

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ಆರೋಪಿತರು ಗೊತ್ತು. ಚಾಸಾ–2 ಗೊತ್ತು. ಚಾಸಾ–1 ಗೊತ್ತಿಲ್ಲ. ಪ್ರಕರಣದ ವಿಚಾರಗಳು ಗೊತ್ತಿಲ್ಲ.

ಸಾಕ್ಷಿಗೆ ನಿಪಿ–2 ರ ತೋರಿಸಲಾಗಿ ಅದು ಜಪ್ತಿ ಪಂಚನಾಮೆಯಾಗಿದ್ದು ಅದರ ಮೇಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು ಸಾಕ್ಷಿ ಹೆಬ್ಬೆಟ್ಟಿನ ಗುರುತನ್ನು ನಿಪಿ–2(ಸಿ) ಎಂದು ಗುರುತಿಸಲಾಯಿತು. ನಿಪಿ–2 ರ ದಾಖಲೆಗೆ ಸುಮಾರು ವರ್ಷಗಳ ಹಿಂದೆ ಸರಡಗಿ ಗ್ರಾಮದಲ್ಲಿ ಪೊಲೀಸರು ಬೀಟ್ ವಿಚಾರವಾಗಿ ಬಂದಿದ್ದು ಆಗ ಸಹಿ ಮಾಡಿರುತ್ತೇನೆ. ಚಾಸಾ–1 ರವರ ನಿಪಿ–2 ಸಹಿ ಮಾಡು ಅಂತಾ ಹೇಳಿದ ಕಾರಣ ಸಹಿ ಮಾಡಿರುತ್ತೇನೆ. ನಿಪಿ–2 ರಲ್ಲಿ ಬರೆದಂತಹ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಪಂಚನಾಮೆ ಮಾಡಿಲ್ಲ. ನನ್ನ ಸಮಕ್ಷಮ ಮರಳನ್ನು ಹಾಗೂ ಯಾವುದೇ ವಾಹನವನ್ನು ವಶಪಡಿಸಿಕೊಂಡಿಲ್ಲ. ಪೋಲಿಸರು ನಿಪಿ–2 ದಾಖಲೆಯಲ್ಲಿ ಬರೆದಂತಹ ವಿಚಾರಗಳನ್ನು ನನಗೆ ಓದಿ ಹೇಳಿಲ್ಲ. ಸಾಕ್ಷಿಗೆ 16 ಛಾಯಾಚಿತ್ರಗಳನ್ನು ತೋರಿಸಲಾಗಿ ಅದರಲ್ಲಿರುವ ಟಿಪ್ಪರ್ ವಾಹನವನ್ನು ನೋಡಿ ಗುರುತಿಸಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ</u>**

ದಿನಾಂಕ 03-07-2015 ರಂದು ಕೋನಾ ಹಿಪ್ಪರಗಿ ಗ್ರಾಮದ ಭೀಮಾ ನದಿ ತೀರದಲ್ಲಿ ಬೆಳಿಗ್ಗೆ 08-00 ರಿಂದ 09-30 ಗಂಟೆವರೆಗೆ ಪೋಲಿಸರು ನನ್ನ ಮತ್ತು ಚಾಸಾ-2 ರವರ ಸಮಕ್ಷಮ ನಿಪಿ-2 ರಂತೆ ಗುನ್ನಾ ಜಾಗೆ ಪಂಚನಾಮೆ ಜರುಗಿಸಿರುತ್ತಾರೆಂದರೆ ಸರಿಯಲ್ಲ. ಗುನ್ನಾ ಜಾಗವನ್ನು ಚಾಸಾ 1 ರವರು ನನಗೆ ಮತ್ತು ಚಾಸಾ-2 ರವರಿಗೆ ತೋರಿಸಿರುತ್ತಾರೆಂದರೆ ಸರಿಯಲ್ಲ. ಪೋಲಿಸರು 3 ಬ್ರಾಸ್ ಮರಳು ಹಾಗೂ 4 ಟಿಪ್ಪರ್ ವಾಹನಗಳನ್ನು ಆರೋಪಿತರು ಅಕ್ರಮವಾಗಿ ಮರಳನ್ನು ಸಾಗಾಟ ಮಾಡುತ್ತಿದ್ದ ವಿಚಾರವಾಗಿ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ ಇಲ್ಲ</u>**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂಡಾಧಿಕಾರಿಗಳು, ಜೇವರಗಿ